All India Radio: Bangalore

National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

09.12.2025 1.10 p.m.

<><><><>

ಮುಖ್ಯಾಂಶಗಳು

- ಮುಂದಿನ ವರ್ಷದ ಮಾರ್ಚ್ ವೇಳೆಗೆ ಎಡಪಂಥೀಯ ಉಗ್ರವಾದ ಸಂಪೂರ್ಣ ನಿರ್ಮೂಲನೆ- ಕೇಂದ್ರ ಸರ್ಕಾರ
- ಪ್ರವಾಹ, ಕಾಡುಪ್ರಾಣಿಗಳಿಂದ ಉಂಟಾಗುವ ನಷ್ಟ ಸರಿದೂಗಿಸಲು ಬೆಳೆ ವಿಮೆ ವಿಸ್ತರಣೆ- ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್
- ಎನ್‌ಡಿಎ ಸಂಸದೀಯ ಪಕ್ಷದ ಸಭೆ; ದೇಶದ ಅಭಿವೃದ್ಧಿಗಾಗಿ ಹೆಚ್ಚಿನ ವೇಗದಲ್ಲಿ ಕೆಲಸ ಮಾಡುವಂತೆ ನಾಯಕರಿಗೆ ಪ್ರಧಾನಿ ಸಲಹೆ
- ಟಿ-೨೦ ಕ್ರಿಕೆಟ್; ಸರಣಿಯ ಮೊದಲ ಪಂದ್ಯದಲ್ಲಿಂದು ಭಾರತ - ದಕ್ಷಿಣ ಆಫ್ರಿಕಾ ಮುಖಾಮುಖಿ

<><><><>

ಎಡಪಂಥೀಯ ಉಗ್ರವಾದದ ವಿರುದ್ಧ ಶೂನ್ಯ ಸಹಿಷ್ಣುತೆ ನೀತಿಯನ್ನು ಕೇಂದ್ರ ಸರ್ಕಾರ ಅಳವಡಿಸಿಕೊಂಡಿದೆ. ಮುಂದಿನ ವರ್ಷದ ಮಾರ್ಚ್ ವೇಳೆಗೆ ಎಡಪಂಥೀಯ ಉಗ್ರವಾದ ನಿರ್ಮೂಲನೆ ಮಾಡುವ ಗುರಿಯನ್ನು ಸರ್ಕಾರ ಹೊಂದಿದೆ ಎಂದು ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ ತಿಳಿಸಿದ್ದಾರೆ. ಲೋಕಸಭೆಯಲ್ಲಿಂದು ಪ್ರಶ್ನೋತ್ತರ ಅವಧಿಯಲ್ಲಿ ಪೂರಕ ಪ್ರಶ್ನೆಗಳಿಗೆ ಉತ್ತರಿಸಿದ ಸಚಿವರು, ಎಡಪಂಥೀಯ ಉಗ್ರವಾದವನ್ನು ಕೊನೆಗೊಳಿಸಲು ಕೇಂದ್ರವು ರಾಜ್ಯ ಸರ್ಕಾರಗಳೊಂದಿಗೆ ಸಮನ್ವಯದಿಂದ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು. ಎಡಪಂಥೀಯ ಉಗ್ರವಾದವು ದೇಶದ ಸಂವಿಧಾನವನ್ನು ನಂಬುವುದಿಲ್ಲ ಅಥವಾ ಪ್ರಜಾಪ್ರಭುತ್ವದಲ್ಲಿ ನಂಬಿಕೆಯನ್ನು ಹೊಂದಿಲ್ಲ. ಎಡಪಂಥೀಯ ಉಗ್ರಗಾಮಿಗಳು ಸಾವಿರಾರು ಮುಗ್ಧ ಜನರನ್ನು ಕೊಂದಿದ್ದಾರೆ ಮತ್ತು ಅನೇಕ ಮಕ್ಕಳನ್ನು ಅನಾಥರನ್ನಾಗಿ ಮಾಡಿದ್ದಾರೆ ಎಂದು ಅವರು ವಿವರಿಸಿದರು. ಎಡಪಂಥೀಯ ಉಗ್ರವಾದದ ವಿರುದ್ಧದ ಈ ನೀತಿಯಡಿಯಲ್ಲಿ, ರಾಜ್ಯಗಳಿಗೆ ಸಿಎಪಿಎಫ್ ಬೆಟಾಲಿಯನ್‌ಗಳನ್ನು ನೀಡಲಾಗಿದೆ. ಭದ್ರತಾ ಸಂಬಂಧಿತ ವೆಚ್ಚ ಯೋಜನೆಯಡಿಯಲ್ಲಿ ಮೂರು ಸಾವಿರದ ೫೨೩ ಕೋಟಿ ರೂಪಾಯಿ ಬಿಡುಗಡೆ ಮಾಡಲಾಗಿದೆ ಮತ್ತು ವಿಶೇಷ ಕೇಂದ್ರ ನೆರವಿನಡಿಯಲ್ಲಿ ಮೂರು ಸಾವಿರದ ೮೪೮ ಕೋಟಿ ರೂಪಾಯಿಗಳನ್ನು ಸಹ ನೀಡಲಾಗಿದೆ ಎಂದು ಸಚಿವ ನಿತ್ಯಾನಂದ ರೈ ಮಾಹಿತಿ ನೀಡಿದರು. ೭೦೬ ಪೊಲೀಸ್ ಠಾಣೆಗಳ ಸ್ಥಾಪನೆಗೆ ಅನುಮೋದನೆ ನೀಡಲಾಗಿದ್ದು, ಜೊತೆಗೆ ಸಾಕಷ್ಟು ತರಬೇತಿ ಸೌಲಭ್ಯಗಳನ್ನು ನೀಡಲಾಗಿದೆ. ೨೦

ಸಾವಿರದ ೮೧೫ ಕೋಟಿ ರೂಪಾಯಿಗಳ ಅನುಮೋದನೆಯೊಂದಿಗೆ, ೧೭ ಸಾವಿರ ಕಿಲೋಮೀಟರ್‌ಗಳಿಗೂ ಹೆಚ್ಚು ರಸ್ತೆಗಳ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದ್ದು, ಅದರಲ್ಲಿ ಶೇಕಡ ೮೫ ರಷ್ಟು ಕೆಲಸ ಪೂರ್ಣಗೊಂಡಿದೆ. ಹತ್ತು ಸಾವಿರಕ್ಕೂ ಹೆಚ್ಚು ಮೊಬೈಲ್ ಟವರ್‌ಗಳನ್ನು ಸಹ ಸ್ಥಾಪಿಸಲಾಗಿದೆ ಎಂದು ಅವರು ತಿಳಿಸಿದರು. ೨೦೦೪ ರಿಂದ ೨೦೧೪ ರ ನಡುವೆ ೧೬ ಸಾವಿರಕ್ಕೂ ಹೆಚ್ಚು ಹಿಂಸಾಚಾರ ಘಟನೆಗಳು ನಡೆದಿವೆ. ಇದು ಕಳೆದ ಹತ್ತು ವರ್ಷಗಳಲ್ಲಿ ಸುಮಾರು ಏಳು ಸಾವಿರಕ್ಕೆ ಇಳಿದಿದೆ. ಈ ಅವಧಿಯಲ್ಲಿ ನಾಗರಿಕರ ಸಾವುಗಳು ಶೇಕಡ ೭೦ ರಷ್ಟು ಇಳಿಕೆಯಾಗಿದೆ ಎಂದು ಸಚಿವ ನಿತ್ಯಾನಂದ ರೈ ಮಾಹಿತಿ ನೀಡಿದರು.

<><><><>

ಪ್ರವಾಹ ಮತ್ತು ಕಾಡುಪ್ರಾಣಿಗಳಿಂದ ಉಂಟಾಗುವ ನಷ್ಟವನ್ನು ಸರಿದೂಗಿಸಲು ಕೇಂದ್ರ ಸರ್ಕಾರವು ಬೆಳೆ ವಿಮೆಯನ್ನು ವಿಸ್ತರಿಸಲು ನಿರ್ಧರಿಸಿದೆ. ಲೋಕಸಭೆಯಲ್ಲಿಂದು ಪ್ರಶ್ನೋತ್ತರ ಅವಧಿಯಲ್ಲಿ ಉತ್ತರಿಸಿದ ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಪ್ರವಾಹ ಮತ್ತು ಕಾಡುಪ್ರಾಣಿಗಳಿಂದ ಉಂಟಾಗುವ ನಷ್ಟಗಳನ್ನು ಸರಿದೂಗಿಸಲು ಬೆಳೆ ವಿಮಾ ಯೋಜನೆಯ ವ್ಯಾಪ್ತಿಯನ್ನು ವಿಸ್ತರಿಸಲಾಗುವುದು ಎಂದು ಭರವಸೆ ನೀಡಿದ್ದಾರೆ. ದೇಶದಲ್ಲಿ ಈ ವರ್ಷ ಒಟ್ಟು ಆಹಾರ ಧಾನ್ಯ ಉತ್ಪಾದನೆಯು ೩೫೭ ದಶಲಕ್ಷ ಟನ್‌ಗಳಿಗಿಂತ ಹೆಚ್ಚು ಎಂದು ಅಂದಾಜಿಸಲಾಗಿದೆ. ಇದು ಕಳೆದ ವರ್ಷಕ್ಕೆ ಹೋಲಿಸಿದರೆ ಶೇಕಡ ೭.೬೫ ರಷ್ಟು ಹೆಚ್ಚಾಗಿದೆ. ರೈತರ ಕಠಿಣ ಪರಿಶ್ರಮ ಮತ್ತು ಕೇಂದ್ರದ ನೀತಿಗಳಿಂದಾಗಿ ಇದು ಸಾಧ್ಯವಾಗಿದೆ ಎಂದು ಹೇಳಿದರು. ೨೦೨೪-೨೫ರಲ್ಲಿ ದೇಶವು ಇದುವರೆಗಿನ ಅತ್ಯಧಿಕ ಬೆಳೆ ಉತ್ಪಾದನೆಯನ್ನು ದಾಖಲಿಸಿದೆ. ೨೦೧೪-೧೫ಕ್ಕೆ ಹೋಲಿಸಿದರೆ ಆಹಾರ ಧಾನ್ಯ ಉತ್ಪಾದನೆಯು ಸುಮಾರು ಶೇಕಡಾ ೪೨ ರಷ್ಟು ಹೆಚ್ಚಾಗಿದೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಮಾಹಿತಿ ನೀಡಿದರು.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ನವದೆಹಲಿಯಲ್ಲಿ ೨೦೨೩ ಮತ್ತು ೨೦೨೪ ರ ಕರಕುಶಲ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ. ಈ ಪ್ರತಿಷ್ಠಿತ ರಾಷ್ಟ್ರೀಯ ಪ್ರಶಸ್ತಿಗಳು ಅಸಾಧಾರಣ ಕಲಾತ್ಮಕ ಪಾಂಡಿತ್ಯವನ್ನು ಹಾಗೂ ಭಾರತದ ಶ್ರೀಮಂತ ಮತ್ತು ವೈವಿಧ್ಯಮಯ ಕರಕುಶಲ ಪರಂಪರೆಯನ್ನು ಸಂರಕ್ಷಿಸುವ ಮತ್ತು ಉತ್ತೇಜಿಸುವ ಸರ್ಕಾರದ ಬದ್ಧತೆಯನ್ನು ಒತ್ತಿಹೇಳುತ್ತವೆ. ಕೇಂದ್ರ ಜವಳಿ ಸಚಿವ ಗಿರಿರಾಜ್ ಸಿಂಗ್ ಮತ್ತು ಕೇಂದ್ರ ಜವಳಿ ಖಾತೆ ರಾಜ್ಯ ಸಚಿವ ಪಬಿತ್ರಾ ಮಾರ್ಗರಿಟಾ ಅವರು ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ ಎಂದು ಕೇಂದ್ರ ಜವಳಿ ಸಚಿವಾಲಯ ತಿಳಿಸಿದೆ.

<><><><>

ನವದೆಹಲಿಯ ಸಂಸತ್ ಭವನದ ಸಂಕೀರ್ಣದಲ್ಲಿಂದು ಎನ್‌ಡಿಎ ಸಂಸದೀಯ ಪಕ್ಷದ ಸಭೆ ನಡೆಯಿತು. ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ

ರಾಜನಾಥ್ ಸಿಂಗ್, ಬಿಜೆಪಿ ರಾಷ್ಟ್ರೀಯಾಧ್ಯಕ್ಷ ಜೆ.ಪಿ.ನಡ್ಡಾ, ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್, ಜೆಡಿಯು ಸಂಸದ ಸಂಜಯ್ ಝಾ, ರಾಷ್ಟ್ರೀಯ ಲೋಕ ಮೋರ್ಚಾ ಮುಖ್ಯಸ್ಥ ಉಪೇಂದ್ರ ಕುಶ್ವಾಹ, ಎನ್‌ಸಿಪಿ ಸಂಸದ ಪ್ರಫುಲ್ ಪಟೇಲ್ ಸೇರಿದಂತೆ ಎನ್‌ಡಿಎ ಸಂಸದರು ಸಭೆಯಲ್ಲಿ ಹಾಜರಿದ್ದರು. ಈ ವೇಳೆ, ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಮೈತ್ರಿಕೂಟದ ಗೆಲುವಿಗಾಗಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಎನ್‌ಡಿಎ ಸದಸ್ಯರು ಅಭಿನಂದಿಸಿದರು. ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ದೇಶದ ಅಭಿವೃದ್ಧಿಗಾಗಿ ಹೆಚ್ಚಿನ ವೇಗದಲ್ಲಿ ಕೆಲಸ ಮಾಡುವಂತೆ ಎನ್‌ಡಿಎ ನಾಯಕರಿಗೆ ಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದರು ಎಂದು ತಿಳಿಸಿದರು. ಸಾರ್ವಜನಿಕರ ಜೀವನವನ್ನು ಸುಗಮಗೊಳಿಸಲು ಮತ್ತು ಅವರು ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಹರಿಸಲು ಎಲ್ಲಾ ಕ್ಷೇತ್ರಗಳಲ್ಲಿ ಸುಧಾರಣೆ ಕೈಗೊಳ್ಳುವಂತೆ ಹಾಗೂ ಯುವಜನರೊಂದಿಗೆ ಸಂಪರ್ಕ ಸಾಧಿಸುವಂತೆ ಎನ್‌ಡಿಎ ಸಂಸದರನ್ನು ಪ್ರಧಾನಿ ಒತ್ತಾಯಿಸಿದರು ಎಂದು ಸಚಿವ ಕಿರಣ್ ರಿಜಿಜು ವಿವರಿಸಿದರು.

<><><><>

ಭಾರತ ಸರ್ಕಾರದ ಶಿಕ್ಷಣ ಸಚಿವಾಲಯದ ಇನ್ನೋವೇಶನ್ ಸೆಲ್ ಸಹಯೋಗದೊಂದಿಗೆ ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್ ೨೦೨೫ ರ ಎಂಟನೇ ಆವೃತ್ತಿಯು ದೇಶದ ೬೦ ನೋಡಲ್ ಕೇಂದ್ರಗಳಲ್ಲಿ ನಡೆಯುತ್ತಿದ್ದು, ಇಂದು ಫಿನಾಲೆ ಪೂರ್ಣಗೊಳ್ಳಲಿದೆ. ಮುಂಬೈನಲ್ಲಿರುವ ಪ್ರಿನ್. ಎಲ್.ಎನ್.ವೆಲಿಂಗ್ಕರ್ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್ ಡೆವಲಪ್ಮೆಂಟ್ ಆಂಡ್ ರಿಸರ್ಚ್‌ನಲ್ಲಿ ಸಾಫ್ಟ್‌ವೇರ್ ಗ್ರ್ಯಾಂಡ್ ಫಿನಾಲೆಯನ್ನು ಆಯೋಜಿಸಿದೆ. ಈ ವರ್ಷ ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್‌ನಲ್ಲಿ ೬೮ ಸಾವಿರದ ೭೬೬ ವಿದ್ಯಾರ್ಥಿ ತಂಡಗಳಿಂದ ದಾಖಲೆಯ ೭೨ ಸಾವಿರದ ೧೬೫ ವಿಚಾರಗಳನ್ನು ಸ್ವೀಕರಿಸಲಾಗಿದೆ.

<><><><>

ನಾಗರಿಕ ವಿಮಾನಯಾನ ಸಚಿವಾಲಯವು, ತನ್ನ ಹಿರಿಯ ಅಧಿಕಾರಿಗಳಿಗೆ ವಿಮಾನಯಾನ ಕಾರ್ಯಾಚರಣೆಗಳು ಮತ್ತು ಪ್ರಯಾಣಿಕರಿಗೆ ಸಂಬಂಧಿಸಿದ ಸೇವೆಗಳನ್ನು ಪರಿಶೀಲಿಸಲು ವಿಮಾನ ನಿಲ್ದಾಣಗಳಿಗೆ ಭೇಟಿ ನೀಡುವಂತೆ ಸೂಚಿಸಿದೆ. ಭೇಟಿಯ ಸಮಯದಲ್ಲಿ ಪ್ರಯಾಣಿಕರಿಂದ ಪಡೆದ ಪ್ರತಿಕ್ರಿಯೆ ಸೇರಿದಂತೆ ಯಾವುದೇ ನ್ಯೂನತೆಗಳನ್ನು ಗುರುತಿಸಿದರೆ, ಅವುಗಳನ್ನು ತಕ್ಷಣವೇ ಪರಿಹರಿಸಬೇಕು ಮತ್ತು ಸರಿಪಡಿಸಬೇಕು ಎಂದು ಸಚಿವಾಲಯ ತಿಳಿಸಿದೆ. ಪ್ರಸ್ತುತ ಪರಿಸ್ಥಿತಿಯ ಸಮಗ್ರ ಮೌಲ್ಯಮಾಪನಕ್ಕಾಗಿ ನವದೆಹಲಿಯಲ್ಲಿ ನಾಗರಿಕ ವಿಮಾನಯಾನ ಸಚಿವ ಕೆ.ರಾಮ್ ಮೋಹನ್ ನಾಯ್ಡು ಅವರ ಅಧ್ಯಕ್ಷತೆಯಲ್ಲಿ ನಡೆದ ಉನ್ನತ ಮಟ್ಟದ ಪರಿಶೀಲನಾ ಸಭೆಯಲ್ಲಿ ಈ ಸೂಚನೆಯನ್ನು ನೀಡಲಾಗಿದೆ. ಇಂಡಿಗೋ ಕಾರ್ಯಾಚರಣೆಗಳಿಂದ ಉಂಟಾದ ಅಡಚಣೆಗಳ

ನಂತರ, ಈ ತಿಂಗಳ ೩ನೇ ತಾರೀಖಿನಿಂದ ಎಲ್ಲಾ ವಿಮಾನ ನಿಲ್ದಾಣಗಳಲ್ಲಿನ ಪರಿಸ್ಥಿತಿಯನ್ನು ನೈಜ ಸಮಯದಲ್ಲಿ ಡಿಜಿಸಿಎ ಜೊತೆಗೆ ಸಚಿವಾಲಯ ನಿಕಟವಾಗಿ ಮೇಲ್ವಿಚಾರಣೆ ಮಾಡುತ್ತಿದೆ.

<><><>

ವಿಮಾನ ಕಾರ್ಯಾಚರಣೆಗಳು ಬಹುತೇಕ ಸಾಮಾನ್ಯ ಸ್ಥಿತಿಗೆ ಮರಳಿವೆ ಎಂದು ನಾಗರಿಕ ವಿಮಾನಯಾನ ಕಾರ್ಯದರ್ಶಿ ಸಮೀರ್ ಕುಮಾರ್ ಸಿನ್ಹಾ ಹೇಳಿದ್ದಾರೆ. ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಇಂಡಿಗೋ ನಿನ್ನೆ ೧ ಸಾವಿರ ೮೦೦ ಕ್ಕೂ ಹೆಚ್ಚು ವಿಮಾನಗಳನ್ನು ನಿರ್ವಹಿಸಿದೆ. ಇದು ತನ್ನ ಸಾಮಾನ್ಯ ವೇಳಾಪಟ್ಟಿಗೆ ಹತ್ತಿರದಲ್ಲಿದೆ. ಅಕಾಸಾ, ಏರ್ ಇಂಡಿಯಾ ಎಕ್ಸ್‌ಪ್ರೆಸ್ ಮತ್ತು ಸ್ಪೈಸ್‌ಜೆಟ್ ಸೇರಿದಂತೆ ಎಲ್ಲಾ ಇತರೆ ವಿಮಾನಯಾನ ಸಂಸ್ಥೆಗಳು ಪೂರ್ಣ ಸಾಮರ್ಥ್ಯದಲ್ಲಿ ಕಾರ್ಯನಿರ್ವಹಿಸಿವೆ ಎಂದು ತಿಳಿಸಿದರು. ಇಂಡಿಗೋ ವಿಮಾನಯಾನ ಸಂಸ್ಥೆಯು ಬಹುತೇಕ ಎಲ್ಲಾ ಮರುಪಾವತಿಗಳನ್ನು ಪೂರ್ಣಗೊಳಿಸಿದೆ. ಸುಮಾರು ೯೦ ಪ್ರತಿಶತದಷ್ಟು ಸಾಮಾನುಗಳನ್ನು ಈಗಾಗಲೇ ತಲುಪಿಸಲಾಗಿದೆ. ಮುಂದಿನ ೨೪ ಗಂಟೆಗಳಲ್ಲಿ, ಬಾಕಿ ಇರುವ ಎಲ್ಲಾ ಸಾಮಾನುಗಳು ಪ್ರಯಾಣಿಕರ ಗೊತ್ತುಪಡಿಸಿದ ಸ್ಥಳಗಳನ್ನು ತಲುಪಲಿವೆ ಎಂದು ಅವರು ಮಾಹಿತಿ ನೀಡಿದರು.

<><><>

ಕೇರಳದಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆಯ ಮೊದಲ ಹಂತದ ಮತದಾನ ಪ್ರಗತಿಯಲ್ಲಿದೆ. ಒಟ್ಟು ಏಳು ಜಿಲ್ಲೆಗಳಲ್ಲಿ ಬೆಳಗ್ಗೆ ೭ ಗಂಟೆಯಿಂದ ಮತದಾನ ನಡೆಯುತ್ತಿದ್ದು, ಸರತಿ ಸಾಲಿನಲ್ಲಿ ನಿಂತು ನಾಗರಿಕರು ತಮ್ಮ ಹಕ್ಕು ಚಲಾಯಿಸುತ್ತಿದ್ದಾರೆ.

<><><>

ದಿತ್ವಾ ಚಂಡಮಾರುತದ ನಂತರ ಭಾರತೀಯ ಸೇನೆಯು ಶ್ರೀಲಂಕಾಕ್ಕೆ ತನ್ನ ನಿರಂತರ ಮಾನವೀಯ ನೆರವು ಮುಂದುವರಿಸಿದೆ. ಶ್ರೀಲಂಕಾ ಸೇನೆ ಮತ್ತು ನಾಗರಿಕ ಆಡಳಿತದೊಂದಿಗೆ ನಿಕಟ ಸಮನ್ವಯದೊಂದಿಗೆ ನಿರ್ಣಾಯಕ ಬೆಂಬಲ ಮತ್ತು ಉತ್ತಮ ಗುಣಮಟ್ಟದ ವೈದ್ಯಕೀಯ ಆರೈಕೆಯನ್ನು ಭಾರತ ನೀಡುತ್ತಿದೆ.

<><><>

ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವಿನ ೫ ಪಂದ್ಯಗಳ ಟಿ-೨೦ ಕ್ರಿಕೆಟ್ ಸರಣಿ ಇಂದು ಆರಂಭವಾಗಲಿದೆ. ಮೊದಲ ಪಂದ್ಯ ಒಡಿಶಾದ ಕಟಕ್‌ನಲ್ಲಿರುವ ಬಾರಾಬತಿ ಕ್ರೀಡಾಂಗಣದಲ್ಲಿ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ಏತನ್ಮಧ್ಯೆ, ಹಾರ್ದಿಕ್ ಪಾಂಡ್ಯ ಮತ್ತು ಶುಭ್‌ಮನ್ ಗಿಲ್ ಇಬ್ಬರೂ ಗಾಯದ ಸಮಸ್ಯೆಯಿಂದ ಚೇತರಿಸಿಕೊಂಡಿದ್ದು, ಈ ಸರಣಿಯಲ್ಲಿ ಆಡಲು ಸಜ್ಜಾಗಿದ್ದಾರೆ ಎಂದು ಭಾರತ ತಂಡದ ನಾಯಕ ಸೂರ್ಯಕುಮಾರ್ ಯಾದವ್ ದೃಢಪಡಿಸಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>